159ನೇ ಅ
(08)

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್ ಇವರ ನಿಯಮ 330ರ ಗಮನ ಸೆಳೆಯುವ ಸೂಚನೆಗೆ ಉತ್ತರ.**

*****

**ವಿಷಯ :** ಸಮಾಜ ಕಲ್ಯಾಣ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಆಹಾರದ ಗುಣಮಟ್ಟ, ಆಹಾರ ಧಾನ್ಯಗಳ ಪೂರೈಕೆ, ಶುಚಿತ್ವ ಹಾಗೂ ಆರೋಗ್ಯದ ಕುರಿತು ನಿಯಮ-330ರಡಿ ಚರ್ಚೆ – ಸರ್ಕಾರಕ್ಕೆ ಉತ್ತರ ಸಲ್ಲಿಸುವ ಕುರಿತು.

******

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 1215 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳನ್ನು ಹಾಗೂ 719 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಮತ್ತು 04 ದೀನದಯಾಳ್ ಉಪಾಧ್ಯಾಯ ವಿದ್ಯಾರ್ಥಿ ನಿಲಯಗಳನ್ನು ನಿರ್ವಹಿಸಲಾಗುತ್ತಿದೆ, ವಿವರ ಕೆಳಕಂಡಂತಿದೆ.

| ಕ್ರ.ಸಂ | ನಿಲಯಗಳ ವಿವರ | ವಿದ್ಯಾರ್ಥಿ ನಿಲಯಗಳ ಸಂಖ್ಯೆ | | |
|---|---|---|---|---|
| | | ಬಾಲಕ | ಬಾಲಕಿ | ಒಟ್ಟು |
| 01 | ಮೆಟ್ರಿಕ್ ಪೂರ್ವ ವಿ ನಿಲಯಗಳು | 915 | 298 | **1213** |
| 02 | ಮೆಟ್ರಿಕ್ ನಂತರ ವಿ ನಿಲಯಗಳು | 424 | 307 | **731** |
| 03 | ವಸತಿ ಶಾಲೆ (1 ರಿಂದ 5ನೇ ತರಗತಿ) | 67 | | **67** |
| | **ಒಟ್ಟು** | | | **2011** |

**<u>ವಿದ್ಯಾರ್ಥಿ ನಿಲಯಗಳ ಪ್ರವೇಶ:-</u>**

- 2025-26ನೇ ಸಾಲಿಗೆ ಇಲಾಖೆಯ ವಿದ್ಯಾರ್ಥಿ ನಿಲಯಗಳಿಗೆ ಕೆಳಕಂಡಂತೆ ವಿದ್ಯಾರ್ಥಿಗಳು ದಾಖಲಾಗಿರುತ್ತದೆ ವಿವರ ಕೆಳಕಂಡಂತಿದೆ.

| ಕ್ರ.ಸಂ | ನಿಲಯಗಳ ವಿವರ | ಮಂಜೂರಾತಿ ಸಂಖ್ಯೆ | ದಾಖಲಾತಿ ಸಂಖ್ಯೆ HMIS ನಂತೆ |
|---|---|---|---|
| 01 | ಮೆಟ್ರಿಕ್ ಪೂರ್ವ ವಿ ನಿಲಯಗಳು | 89818 | 97817 |
| 02 | ಮೆಟ್ರಿಕ್ ನಂತರ ವಿ ನಿಲಯಗಳು | 78552 | 116184 |
| 03 | ವಸತಿ ಶಾಲೆ (1 ರಿಂದ 5ನೇ ತರಗತಿ) | 8375 | 2923 |
| | **ಒಟ್ಟು :** | **176745** | **216924** |

- ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪ.ಜಾತಿ/ಪ.ವರ್ಗದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ.

---2

**ಇಲಾಖೆ ವಿದ್ಯಾರ್ಥಿನಿಲಯಗಳಲ್ಲಿನ ಆಹಾರದ ಗುಣಮಟ್ಟವನ್ನು ಅಭಿವೃದ್ಧಿಪಡಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-**

- ಸರ್ಕಾರದ ಆದೇಶ ಸಂಖ್ಯೆ: ಸಕಇ 55 ಪಕವಿ 2023 ಬೆಂಗಳೂರು ದಿ: 05-05-2023 ರಲ್ಲಿ ಪ್ರತಿ ನಿಲಯದಲ್ಲಿ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿಯೇ Mess Committee ಅನ್ನು ರಚಿಸಿ, ಗುಣಮಟ್ಟ ಕಾಯ್ದುಕೊಳ್ಳಲಾಗಿರುತ್ತದೆ. ಹಾಗೂ ವಿದ್ಯಾರ್ಥಿನಿಲಯಗಳಲ್ಲಿನ ಶೌಚಾಲಯ ಸ್ವಚ್ಛತೆ ಹಾಗೂ ನೈರ್ಮಲ್ಯದ ಕುರಿತಾಗಿ Sanitation committee ಯನ್ನು ರಚಿಸಲಾಗಿರುತ್ತದೆ.
- ಈ ಕಛೇರಿ ಆದೇಶ ಸಂಖ್ಯೆ:ಸಕನಿ/ಇಡಿ-4/2022-23, ದಿನಾಂಕ:08-01-2024ರಲ್ಲಿ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಶುಚಿ ರುಚಿಯಾದ ಮತ್ತು ಪೌಷ್ಠಿಕ ಆಹಾರವನ್ನು ನೀಡುವ ಕುರಿತು ಹಾಗೂ ವಿದ್ಯಾರ್ಥಿನಿಲಯಗಳ ಸಮರ್ಪಕ ನಿರ್ವಹಣೆ ಮಾಡಲು ಜಿಲ್ಲಾಮಟ್ಟಗಳಲ್ಲಿ ವಾರ್ಡನ್, ಅಡುಗೆಯವರು ಮತ್ತು ಅಡುಗೆ ಸಹಾಯಕರು ಹಾಗೂ ರಾತ್ರಿ ಕಾವಲುಗಾರರು (ಹೊರಸಂಪನ್ಮೂಲ ನೌಕರರು ಸೇರಿದಂತೆ)ಗಳಿಗೆ ಸ್ವಚ್ಛತೆ ಹಾಗೂ ರುಚಿಯಾದ ಅಡುಗೆ ತಯಾರಿಸುವ ಕುರಿತಂತೆ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿರುತ್ತದೆ. ಈ ಸಂಬಂಧ ಪ್ರತಿ ಜಿಲ್ಲೆಗೆ ರೂ.50,000/-ಗಳಂತೆ ಒಟ್ಟು 31 ಜಿಲ್ಲೆಗಳಿಗೆ ಅನುದಾನ ಬಿಡುಗಡೆ ಮಾಡಿ ಆದೇಶಿಸಲಾಗಿದೆ.
- ಸಮಾಜ ಕಲ್ಯಾಣ ಇಲಾಖೆ ಇವರ ಆದೇಶ ಸಂಖ್ಯೆ:ಸಕನಿ/ಇಡಿ-4/938298/2022-23 ರಲ್ಲಿ ಇಲಾಖೆಯ ಸರ್ಕಾರಿ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಶುಚಿತ್ವ ಹಾಗೂ ನೈರ್ಮಲ್ಯ ಮತ್ತು ರುಚಿಯಾದ ಊಟ-ತಿಂಡಿ ತಯಾರಿಸುವ ಕುರಿತು International institute of Hotel Management Bangalore ರವರಿಂದ ಬೆಂಗಳೂರು ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ತರಬೇತಿ ನೀಡಲಾಗಿದ್ದು, ಉಳಿದ ಎಲ್ಲಾ ಜಿಲ್ಲೆಗಳಿಗೂ ಇದೇ ಮಾದರಿ ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ನೀಡಲಾಗಿರುತ್ತದೆ.
- ಸರ್ಕಾರದ ಆದೇಶ ಸಂಖ್ಯೆ: ಸಕಇ 738 ಪಕವಿ 2024, ದಿನಾಂಕ: 30-10-2024ರಲ್ಲಿ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಆಹಾರ ಪದಾರ್ಥ ಮತ್ತು ಇತರೆ ಸಾಮಗ್ರಿಗಳನ್ನು ಸರಬರಾಜು ಮಾಡಲು 2024-25ನೇ ಸಾಲಿನಿಂದ ಜಿಲ್ಲಾಮಟ್ಟದಲ್ಲಿ ಪ್ರತಿ ಜಿಲ್ಲೆಯನ್ನು ಘಟಕವನ್ನಾಗಿಸಿ ಪ್ರತಿ 02 ವರ್ಷಗಳಿಗೊಮ್ಮೆ ಕಡ್ಡಾಯವಾಗಿ ಟೆಂಡರ್ ಕರೆಯುವಂತೆ ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸಿ ಆದೇಶಿಸಿದೆ.
- ಸರ್ಕಾರದ ಆದೇಶ ಸಂಖ್ಯೆ: ಸಕಇ 97 ಪಕವಿ 2023, ದಿನಾಂಕ : 28-07-2023ರಲ್ಲಿ ಟೆಂಡರ್ ಮೂಲಕ ಪಡೆಯಲಾಗುವ ಆಹಾರ ಸಾಮಾಗ್ರಿಗಳ ಗುಣಮಟ್ಟ ಕಾಯ್ದುಕೊಳ್ಳುವಂತೆಯೂ ಹಾಗೂ Freak Rate ನಮೂದಿಸುವ ಗುತ್ತಿಗೆದಾರರ ಬಿಡ್ ಅನ್ನು ನಿಯಮಾನುಸಾರ ತಿರಸ್ಕರಿಸುವಂತೆ ಸೂಚಿಸಲಾಗಿರುತ್ತದೆ.
- ಸರ್ಕಾರದ ಆದೇಶ ಸಂಖ್ಯೆ:ಸಕಇ 260 ಎಂಡಿಎಸ್ 2024, ದಿನಾಂಕ:06-01-2025 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲಾ / ಕಾಲೇಜುಗಳು ಮತ್ತು ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಮೆನು ಪ್ರಕಾರ ಸಕಾಲದಲ್ಲಿ ಊಟದ ಗುಣಮಟ್ಟ ಮತ್ತು ಸ್ಥಿರತೆಯ ಬಗ್ಗೆ

---3

ಪಾರದರ್ಶಕತೆ ಮತ್ತು ಸಾರ್ವಜನಿಕ ಜಾಗೃತಿಯನ್ನು ಖಚಿತಪಡಿಸಿಕೊಳ್ಳಲು ಬೆಳಗಿನ ಉಪಹಾರ, ಮಧ್ಯಾಹ ಮತ್ತು ರಾತ್ರಿ ಊಟಕ ದೈನಂದಿನ ಫೋಟೋಗಳನ್ನು X (Formally Twitter) ನಲ್ಲಿ Post ಮಾಡಲು ಮಾರ್ಗಸೂಚಿಗಳನ್ನು ಹೊರಡಿಸಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ಇಲಾಖಾ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಿ ಆದೇಶಿಸಿದೆ.

- ಸಮಾಜ ಕಲ್ಯಾಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ: SWD/ SCHC/ SC/ 23/ 2023/ 1184131) ದಿನಾಂಕ: 19-09-2023 ರಲ್ಲಿ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಸಿದ್ಧಪಡಿಸಲಾಗುತ್ತಿರುವ ಆಹಾರದ ಗುಣಮಟ್ಟ ಕಾಯ್ದುಕೊಳ್ಳುವ ಸಂಬಂಧ Taste Register (ರುಚಿ ಪರಿಶೀಲನಾ ವಹಿ)ಯನ್ನು ನಿರ್ವಹಿಸುವಂತೆ ಸೂಚಿಸಿದೆ.
- ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಸಂಖ್ಯೆ:SWD/EDU/ED7/ 20/2023/1065640 ದಿನಾಂಕ:07-10-2023ರಲ್ಲಿ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಿದ್ಯಾರ್ಥಿನಿಲಯ ಹಾಗೂ ವಸತಿ ಶಾಲೆಗಳಿಗೆ ಮಾಹೆಯಾನ ಸರಬರಾಜು ಆಗುತ್ತಿರುವ ಆಹಾರ ಪದಾರ್ಥಗಳ ಸಂಬಂಧ, ಪ್ರತಿ ಮಾಹೆ ಸರಬರಾಜು ಆಗುತ್ತಿರುವ ಆಹಾರ ಪದಾರ್ಥಗಳ ಮಾದರಿಯನ್ನು ಸಂರಕ್ಷಿಸುವ ಬಗ್ಗೆ ಕ್ರಮವಹಿಸಲಾಗಿದೆ. ಹಾಗೂ ಮಾಹೆಯಾನ ಸರಬರಾಜಾಗುತ್ತಿರುವ ಆಹಾರ ಪದಾರ್ಥಗಳ ಸಂಬಂಧ, ಪ್ರತಿ ಮಾಹೆ ಸರಬರಾಜಾಗುತ್ತಿರುವ ಆಹಾರ ಪದಾರ್ಥಗಳ ಮಾದರಿಗಳನ್ನು ಪಡೆದು ಸಂರಕ್ಷಿಸಿಡುವ ಬಗ್ಗೆ ಹೊರಡಿಸಲಾಗಿರುವ ಎಲ್ಲಾ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಿ, ಇಲಾಖಾ ವ್ಯಾಪ್ತಿಯ ನಿಲಯಗಳಿಗೆ ಉತ್ತಮ ಗುಣಮಟ್ಟದ ಆಹಾರ ಸಾಮಗ್ರಿಗಳು ಸರಬರಾಜು ಆಗುವಂತೆ ನೋಡಿಕೊಳ್ಳುವುದು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಹಾಗೂ ತಾಲ್ಲೂಕು ಅಧಿಕಾರಿಗಳ ಜವಾಬ್ದಾರಿಯಾಗಿರುತ್ತದೆ. ಒಂದು ವೇಳೆ ಸದರಿ ಮಾರ್ಗಸೂಚಿಗಳನ್ನು ಉಲ್ಲಂಘಿಸಿದಲ್ಲಿ ಸಂಬಂಧಪಟ್ಟ ಜಿಲ್ಲೆಯ ಜಂಟಿ / ಉಪನಿರ್ದೇಶಕರು ಹಾಗೂ ತಾಲ್ಲೂಕು ಮಟ್ಟದ ಸಹಾಯಕ ನಿರ್ದೇಶಕರ ಮೇಲೆ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು.
- ಸಮಾಜ ಕಲ್ಯಾಣ ಇಲಾಖೆ ಆದೇಶ ಸಂಖ್ಯೆ: ಸಕನಿ/ಇಡಿ-4/ಸಿಆರ್- 1691549/2024-25 ದಿನಾಂಕ:28-10-2025ರಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ ಪೌಷ್ಠಿಕಾಂಶ ಪುಡಿಯನ್ನು (Nutrition Powder) ನೀಡಲಾಗುತ್ತಿದೆ.
- ಸರ್ಕಾರದ ಆದೇಶ ಸಂಖ್ಯೆ:ಸಕಇ 287 ಪಕವಿ 2024, ದಿನಾಂಕ:28-11-2024ರಲ್ಲಿ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ನಿಲಯಾರ್ಥಿಗಳಿಗೆ ಹೆಚ್ಚುವರಿ ರೂ.100/- ಗಳಲ್ಲಿ ವಾರದಲ್ಲಿ 04 ದಿನ ತಲಾ ಒಂದು ಮೊಟ್ಟೆಯಂತೆ ಪ್ರತಿ ನಿಲಯಾರ್ಥಿಗಳಿಗೆ ವಿತರಿಸಲು ಆದೇಶಿಸಿದೆ.

ಒಟ್ಟಾರೆಯಾಗಿ ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ಬಗ್ಗೆ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಎಲ್ಲಾ ರೀತಿಯ ಅಗತ್ಯ ಕ್ರಮಕೈಗೊಳ್ಳಲಾಗಿದೆ.

**ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ** ವತಿಯಿಂದ 136 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು, 169 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹಾಗೂ 119 ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು ಸೇರಿ ಒಟ್ಟು 423 ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ.

ವಿದ್ಯಾರ್ಥಿ ನಿಲಯಗಳು ಹಾಗೂ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ 2024-25ನೇ ಸಾಲಿನಿಂದ ರೂ.100/-ಗಳ ಭೋಜನಾ ವೆಚ್ಚವನ್ನು ಹೆಚ್ಚಳ ಮಾಡಲಾಗಿದ್ದು, ಈ ಕೆಳಕಂಡಂತೆ ಮಾಹೆಯಾನ ಭೋಜನಾ ವೆಚ್ಚವನ್ನು ಭರಿಸುತ್ತಿದ್ದು ಉತ್ತಮ ಗುಣಮಟ್ಟದ ಆಹಾರವನ್ನು ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ.

| ಕ್ರ.ಸಂ. | ಸಂಸ್ಥೆಗಳ ವಿವರ | ಮಾಹೆಯಾನ ಭೋಜನಾವೆಚ್ಚ (ರೂ.ಗಳಲ್ಲಿ) |
|---|---|---|
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 1750/- |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು | 1850/- |
| 3 | ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು | 1550/- |

- ಸದರಿ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಗುಣಮಟ್ಟದ ಊಟ ವಸತಿ, ಶುದ್ಧ ಕುಡಿಯುವ ನೀರು ಇನ್ನಿತರೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.
- 2023-24ನೇ ಸಾಲಿನಿಂದ ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳು ಹಾಗೂ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳಲ್ಲಿ ಆಹಾರ ಪದಾರ್ಥ ಮತ್ತು ಇತರೆ ಸಾಮಗ್ರಿಗಳನ್ನು ಒದಗಿಸಲು ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಹಂತದಲ್ಲಿಯೇ ಪ್ರತಿ ಎರಡು ವರ್ಷಗಳಿಗೊಮ್ಮೆ ಟೆಂಡರ್ ಆಹ್ವಾನಿಸಿ ಖರೀದಿಸಿ ಸರಬರಾಜು ಮಾಡಲಾಗುತ್ತಿದೆ. ಟೆಂಡರ್‌ದಾರರು ಸರಬರಾಜು ಮಾಡುವ ಆಹಾರ ಪದಾರ್ಥಗಳು ಬೇಡಿಕೆಯನುಸಾರ QUANTITY ಮತ್ತು ಗುಣಮಟ್ಟದಲ್ಲಿರುವ ಬಗ್ಗೆ ನಿಲಯ ಮೇಲ್ವಿಚಾರಕರು ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ದೃಢೀಕರಿಸುತ್ತಾರೆ.
- ವಿದ್ಯಾರ್ಥಿಗಳು ಊಟ ಮಾಡುತ್ತಿರುವ ಛಾಯಾಚಿತ್ರಗಳನ್ನು ಜಿಲ್ಲಾ ಮಟ್ಟದ ಅಧಿಕಾರಿಗಳ WHATSAPP GROUP ನಲ್ಲಿ ಅಪ್‌ಲೋಡ್ ಮಾಡಿರುವುದನ್ನು ಪರಿಶೀಲಿಸಿ ಆ ದಿನದ ಮೆನು ಚಾರ್ಟ್ ಪ್ರಕಾರ ಆಹಾರವನ್ನು ನೀಡಲಾಗಿದೆಯೇ ಎಂಬುದನ್ನು ಸಂಬಂಧಪಟ್ಟ ನೋಡಲ್ ಅಧಿಕಾರಿಗಳು ಖಾತ್ರಿ ಪಡಿಸಿಕೊಳ್ಳುತ್ತಿರುತ್ತಾರೆ.
- ಆಹಾರ ತಯಾರಿಕೆಯ ಗುಣಮಟ್ಟ ಹಾಗೂ ತಯಾರಿಕೆಯಲ್ಲಿ ಸ್ವಚ್ಛತೆ ನಿರ್ವಹಣೆ ಮತ್ತು ವಿದ್ಯಾರ್ಥಿನಿಲಯದಲ್ಲಿ ಸ್ವಚ್ಛತೆಯನ್ನು ಕಾಪಾಡುವ ನಿಟ್ಟಿನಲ್ಲಿ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ MESS COMMITTEE RUE SANITATION COMMITTEE ವಿದ್ಯಾರ್ಥಿಗಳು ಪ್ರತಿನಿತ್ಯ ಮನು ಚಾರ್ಟ್ ಪ್ರಕಾರ ಉತ್ತಮ ಆಹಾರವನ್ನು ನೀಡುವ ಬಗ್ಗೆ, ಹಾಗೂ ನಿಲಯಕ್ಕೆ ಸ್ವಚ್ಛತಾ ಸಾಮಗ್ರಿಗಳು ಸರಬರಾಜಾಗುವುದು, ಶೌಚಾಲಯ ಹಾಗೂ ಸ್ನಾನದ ಗೃಹಗಳನ್ನು ಸ್ವಚ್ಛ ಮಾಡುತ್ತಿರುವ ಕುರಿತು ಖಾತರಿ ಪಡಿಸಿಕೊಳ್ಳುತ್ತಾರೆ.

---5

- ಮುಂದುವರದು, ಆಹಾರದ ಗುಣಮಟ್ಟ ಹಾಗೂ ನಿಲಯಗಳಲ್ಲಿ ಸ್ವಚ್ಛತೆಯನ್ನು ಕಟ್ಟುನಿಟ್ಟಾಗಿ ಕಾಪಾಡುವಂತೆ ರಾಜ್ಯ ಮಟ್ಟದ ಪ್ರಗತಿ ಪರಿಶೀಲನಾ ಸಭೆಗಳಲ್ಲಿ ಹಾಗೂ ಸುತ್ತೋಲೆಗಳ ಮುಖಾಂತ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ನಿರ್ದೇಶನಗಳನ್ನು ನೀಡಲಾಗುತ್ತಿದೆ.
- ಆಹಾರ ಗುಣಮಟ್ಟದ ಕುರಿತು ಸ್ವಯಂ ಪ್ರೇರಿತವಾಗಿ ಪರಿಶೀಲನೆ ಕೈಗೊಳ್ಳಲು ಸಹಾಯಕ ಆಯುಕ್ತರು (ಕಂದಾಯ ಇಲಾಖೆ) ರವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿರುತ್ತದೆ.
- ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರುಗಳು ಅನಿರೀಕ್ಷಿತವಾಗಿ ವಿದ್ಯಾರ್ಥಿನಿಲಯಗಳಿಗೆ ಭೇಟಿ ನೀಡಿ ಆಹಾರದ ಗುಣಮಟ್ಟ ಹಾಗೂ ಸ್ವಚ್ಛತೆಯ ಬಗ್ಗೆ ಪರಿಶೀಲಿಸುತ್ತಿದ್ದು ಸದರಿ ಆಯೋಗವು ನೀಡುವ ನಿರ್ದೇಶನಗಳನ್ನು ಕೂಡ ಅನುಪಾಲಿಸಲಾಗುತ್ತಿದೆ.
- ಆಯಾ ತಾಲ್ಲೂಕಿನ ತಹಶೀಲ್ದಾರರು ಹಾಗೂ ಆಯಾ ಉಪವಿಭಾಗದ ಉಪವಿಭಾಗಾಧಿಕಾರಿಗಳ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿನಿಲಯಗಳು ಹಾಗೂ ವಸತಿ ಶಾಲೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ಮಾಡುತ್ತಿದ್ದು ಭೇಟಿ ನೀಡಿದ ಸಂದರ್ಭದಲ್ಲಿ ವಿದ್ಯಾರ್ಥಿನಿಲಯಗಳ ಸಮರ್ಪಕ ನಿರ್ವಹಣೆಯ ಬಗ್ಗೆ ಪರಿಶೀಲಿಸಿ ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ನಿಲಯ ಮೇಲ್ವಿಚಾರಕರುಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡುತ್ತಿರುತ್ತಾರೆ.
- ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯಿಂದ ವಿದ್ಯಾರ್ಥಿನಿಲಯಗಳು/ವಸತಿ ಶಾಲೆಗಳಲ್ಲಿ ಆಹಾರ ಸುರಕ್ಷತೆ ಮತ್ತು ಸ್ವಚ್ಛತೆಯ ಕುರಿತು ಸಿಬ್ಬಂದಿಗಳಿಗೆ ತರಬೇತಿ ನೀಡುವಂತೆ ಹಾಗೂ ಸರಬರಾಜಾಗುವ ಆಹಾರ ಸಾಮಗ್ರಿಗಳ ಗುಣಮಟ್ಟದ ಪರೀಕ್ಷೆಯನ್ನು ಕಾಲ ಕಾಲಕ್ಕೆ ಕೈಗೊಳ್ಳಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.
- ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ವಾರಕ್ಕೊಮ್ಮೆ ಅನಿರೀಕ್ಷತವಾಗಿ ಕನಿಷ್ಠ ಎರಡು ದಿನ ವಿದ್ಯಾರ್ಥಿನಿಲಯಗಳು ಹಾಗೂ ವಸತಿ ಶಾಲೆಗಳಿಗೆ ಭೇಟಿ ನೀಡಿ ಊಟದ ಗುಣಮಟ್ಟ ಹಾಗೂ ನಿಲಯದ ಸ್ವಚ್ಛತೆಯ ಬಗ್ಗೆ ಪರಿಶೀಲಿಸಿ ಅಗತ್ಯ ಸಲಹೆ ಸೂಚನೆ/ಮಾರ್ಗದರ್ಶನವನ್ನು ಸಿಬ್ಬಂದಿಗಳಿಗೆ ನೀಡುವಂತೆ ನಿರ್ದೇಶನ ನೀಡಲಾಗಿರುತ್ತದೆ.
- ಪ್ರತಿ ತಿಂಗಳು ಸರಬರಾಜಾಗುವ ಆಹಾರ ಪದಾರ್ಥಗಳು ಉತ್ತಮ ಗುಣಮಟ್ಟದಲ್ಲಿರುವ ಬಗ್ಗೆ ಹಾಗೂ ಬೇಡಿಕೆಯನುಸಾರ ಇರುವ ಪರಿಶೀಲಿಸಿ ದಾಸ್ತಾನು ಪಡೆಯಲು ನಿಲಯ ಮೇಲ್ವಿಚಾರಕರುಗಳಿಗೆ ಸೂಚಿಸಲಾಗಿರುತ್ತದೆ.

**ಸಕಇ 748 ಪಕವಿ 2026**

(ಕೆ.ಹೆಚ್.ಮುನಿಯಪ್ಪ)
**ಸಮಾಜ ಕಲ್ಯಾಣ ಸಚಿವರು**